**ಸಾಕ್ಷಿಯನ್ನು ದಿಃ 23.07.2025 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು – ಎದುರುದಾರರ ಪರ ಶ್ರೀ ಎಮ್ ಎವ್   ವಕೀಲರಿಂದ**

1. ನನ್ನ ಪ್ರಮಾಣ ಪತ್ರದಲ್ಲಿ ಹೇಳಿರುವಂತೆ ಅರ್ಜಿದಾರರಿಗೆ 32.5% ನ್ಯೂನತೆ ಇಲ್ಲ ಸುಳ್ಳಾಗಿ ನಮೂದಿಸಿದ್ದೇನೆ ಎಂರೆ ಸರಿಯಲ್ಲ. ಅರ್ಜಿದಾರರಿಗೆ ಅನೂಕೂಲ ಆಗಲಿ ಎಂದು ಸುಳ್ಳಾಗಿ ಶೇಕಡಾವಾರು ನ್ಯೂನತೆಯನ್ನು ನಮೂದಿಸಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಯಾವುದೇ ನ್ಯೂನತೆ ಇಲ್ಲದೇ ಇದ್ದರೂ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದೇನೆ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಅನುಕೂಲ ಅಗಲೂ ಸುಳ್ಳು ವರದಿ ತಯಾರಿಸಿ  ಸುಳ್ಳು  ಪ್ರಮಾಣ ಪತ್ರವನ್ನು ಹಾಜರುಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದೇನೆ ಎಂದರೆ ಸರಿಯಲ್ಲ. ನಾನು ನ್ಯೂನತಾ ಪ್ರಮಾಣ ಪತ್ರವನ್ನು ಹಾಜರುಪಡಿಸಿದೆ ಇದ್ದರೂ ಸಹ ಸುಳ್ಳಾಗಿ ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಮುಂಬರುವ ಚಿಕಿತ್ಸೆ  ಅಗತ್ಯ ಇಲ್ಲದೆ ಇದ್ದರೂ ಸಹ ಪ್ರಮಾಣ ಪತ್ರದಲ್ಲಿ ಈ ಬಗ್ಗೆ ಸುಳ್ಳಾಗಿ ನಮೂದಿಸಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/–

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.